OS No. 11/2024

DW-6

**(ಇಂದು ದಿಃ 18-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**ಮುಂದುವರೆದ ಮುಖ್ಯ ವಿಚಾರಣೆಃ- 1 ಮತ್ತು 5 ನೇ ಪ್ರತಿವಾದಿಯರ ಪರ ಶ್ರೀ.JPA ವಕೀಲರಿಂದಃ-**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯಾಗಿ ಪ್ರತಿಜ್ಞಾ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನ್ನ ತಿಳುವಳಿಕೆಯ ಮೇರೆಗೆ ಬರೆಯಲ್ಪಟ್ಟಿರುತ್ತವೆ ಮತ್ತು ಅವು ಸತ್ಯವಾಗಿರುತ್ತವೆ. ಪ್ರತಿಜ್ಞಾ ಪತ್ರಕ್ಕೆ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ನಿಡಿ- 9 ನ್ನು ೆ ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿ ಮತ್ತು ಹೆಬ್ಬಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಡಿ-9(ಡಿ) ಎಂದು ಗುರುತಿಸಲಾಯಿತು. ನನ್ನ ಅಜ್ಜಿ ನನ್ನ ಪರವಾಗಿ ನಿಡಿ- 9 ದಾನ ಪತ್ರ ಬರೆದುಕೊಟ್ಟು ಹೆಬ್ಬಟ್ಟಿನ ಗುರುತು ಹಾಕಿರುತ್ತಾರೆ . ನಾನು ಸದರಿ ಹೆಬ್ಬಟ್ಟಿನ ಗುರುತನ್ನು ನೋಡಿ ಗುರುತಿಸಿದ್ದೇನೆ. ನಿಡಿ-9 ಕ್ಕೆ ಕೃಷ್ಣ ಮತ್ತು ರಾಹುಲ್ ಸಾಕ್ಷಿದಾರರಾಗಿ ಸಹಿ ಮಾಡಿದ್ದಾರೆ .

**ಮುಂದುವರೆದ ಮುಖ್ಯ ವಿಚಾರಣೆ ಇಲ್ಲ.**

**(ವಾದಿ ಪರ ವಕೀಲರ ವಿನಂತಿ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಸೇಡಂ.**